ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1896 (1540)
ಸದಸ್ಯರ ಹೆಸರು : ಡಾ॥ ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು
ಉತ್ತರಿಸುವ ದಿನಾಂಕ : 15.03.2022

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಬೀದರ್ ಜಿಲ್ಲೆ ಹುಮನಾಬಾದ್ ಪಟ್ಟಣದ ಹೊರವಲಯದ ವ್ಯಾಪ್ತಿಯಲ್ಲಿ ಕೈಗಾರಿಕಾ ಪ್ರದೇಶದಿಂದ ಹಳ್ಳಕ್ಕೆ ರಾಸಾಯನಿಕ ತ್ಯಾಜ್ಯ ಹರಿಸುತ್ತಿರುವುದರಿಂದ ಸುತ್ತಮುತ್ತ ಹಳ್ಳಿಗಳ ಜನರಿಗೆ ಚರ್ಮ ಕಾಯಿಲೆ ಹಾಗೂ ಜಾನುವಾರುಗಳು ಸಾವನಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು;	ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು ನಿಯಮಾನುಸಾರ ಕಾಲಕಾಲಕ್ಕೆ ಪರಿಶೀಲನೆ ಮಾಡುತ್ತಿರುತ್ತಾರೆ. ನ್ಯೂನತೆಗಳು ಕಂಡು ಬಂದ ಕೈಗಾರಿಕೆಗಳಿಗೆ ನೋಟಿಸ್ ಜಾರಿ ಮಾಡಿ ಸದರಿ ನ್ಯೂನ್ಯತೆಗಳನ್ನು ಸರಿಪಡಿಸಲು ಕ್ರಮವಹಿಸಲಾಗುತ್ತಿದೆ. ಮುಂದುವರೆದು, ನ್ಯೂನ್ಯತೆಗಳನ್ನು ಸರಿಪಡಿಸದೇ ಇರುವ ಕೈಗಾರಿಕೆಗಳ ವಿರುದ್ಧ ಎನ್.ಪಿ.ಡಿ (Notice for Proposed Direction) ಜಾರಿ ಮಾಡಲು ವಲಯ ಕಛೇರಿಗೆ ಶಿಫಾರಸ್ಸು ಮಾಡಲಾಗುತ್ತಿದೆ ಎಂದು ಕೆ.ಎಸ್.ಪಿ.ಸಿ.ಬಿ, ಬೀದರ್ ಇವರು ವರದಿ ಸಲ್ಲಿಸಿರುತ್ತಾರೆ.
ಆ	ರಾಸಾಯನಿಕ ತ್ಯಾಜ್ಯ ಹಳ್ಳಕ್ಕೆ ಹರಿಯದಂತೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ?	ರಾಸಾಯನಿಕ ತ್ಯಾಜ್ಯ ಹಳ್ಳಕ್ಕೆ ಹರಿಯದಂತೆ ತಡೆಗಟ್ಟಲು ಸರ್ಕಾರದಿಂದ ಕೋಳಾರ್ ಕೈಗಾರಿಕಾ ಪ್ರದೇಶದಲ್ಲಿ ಸಾಮೂಹಿಕ ತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಥಾಪಿಸಲಾಗುತ್ತಿದೆ. ಸದರಿ ಕಾಮಗಾರಿಯು ಬಹುತೇಕ ಪೂರ್ಣಗೊಂಡಿದ್ದು, ಪ್ರಾಯೋಗಿಕ ಹಂತದಲ್ಲಿರುತ್ತದೆ.

ಸಿಐ 70 ಎಸ್‌ಪಿಐ 2022

(ಡಾ॥ ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು